ರಾಷ್ಟ್ರೀಯ ಹೆದ್ದಾರಿ ಅಕ್ಕಪಕ್ಕದಲ್ಲಿ ಅನಧಿಕೃತ ಕಟ್ಟಡಗಳು

930 (900); ಕುಮಾರಸ್ವಾಮಿ ಎಚ್. ಕೆ. (ಸಕಲೇಶಪುರ)

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಅಕ್ಕಪಕ್ಕದಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡಲಾಗಿರುವ ಕಟ್ಟಡ / ಮಳಿಗೆಗಳು ಇದ್ದು, ಸಂಚಾರಕ್ಕೆ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದಾಗಿ);

(ಇ) ಸಕಲೇಶಪುರ ಪಟ್ಟಣದಲ್ಲಿ ರಾಷ್ಟ್ರೀಯ ಹೆದ್ದಾರಿ–75ರ ಅಕ್ಕಪಕ್ಕದಲ್ಲಿ ಇತ್ತೀಚೆಗೆ ಅನಧಿಕೃತ ಮಳಿಗೆಗಳು ನಿರ್ಮಾಣವಾಗುತ್ತಿದ್ದು ಮತ್ತು ನಿರ್ಮಾಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ, ತೆರವುಗೊಳಿಸಲಾಗುವುದು (ಸಂಪೂರ್ಣ ವಿವರ ನೀಡುವುದು);

(ಈ) ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಮಧ್ಯಭಾಗದಿಂದ ಎಷ್ಟು ಮೀಟರ್ ಬಿಟ್ಟು ಕಟ್ಟಡ ಕಟ್ಟಬೇಕು ಎಂಬುದರ ಬಗ್ಗೆ ಮಾಹಿತಿ ನೀಡುವುದು?

ಡಾ. ಹೆಚ್. ಸಿ. ಮಹದೇವಪ್ಪ (ಮಾನ್ಯ ಲೋಕೋಪಯೋಗಿ ಸಚಿವರು)

(ಅ) ಬಂದಿದೆ.

(ಆ) & (ಇ) ರಾಷ್ಟ್ರೀಯ ಹೆದ್ದಾರ, ಮಂಗಳೂರು ವಿಭಾಗದ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಹೆದ್ದಾರಿಯ ಅಕ್ಕಪಕ್ಕದಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡಲಾಗಿರುವ ಕಟ್ಟಡ / ಮಳಿಗೆಗಳನ್ನು ತೆರವುಗೊಳಿಸಲು ಕೈಗೊಂಡ ಕ್ರಮಗಳ ಜಿಲ್ಲಾವಾರು, ತಾಲ್ಲೂಕುವಾರು ವಿವರಗಳು ಈ ಕೆಳಗಿನಂತಿವೆ:

ಕ್ರ. ಸಂ.	ಜಿಲ್ಲೆ	ತಾಲ್ಲೂಕು	ಗುರುತಿಸಲಾದ ಅನಧಿಕೃತವಾಗಿ ನಿರ್ಮಾಣ ಮಾಡಲಾಗಿರುವ ಕಟ್ಟಡ/ಮಳಿಗೆಗಳ ಸಂಖ್ಯೆ	ಷರಾ
1	ಹಾಸನ	ಸಕಲೇಶಪುರ	1	

ಹಾಸನ ಜಿಲ್ಲೆ, ಸಕಲೇಶಪುರ ತಾಲ್ಲೂಕು, ಕಸಬಾ ಹೋಬಳಿ, ಮಳಲಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಸರ್ವೆ ನಂ. 277/5ರಲ್ಲಿ ರಾಷ್ಟ್ರೀಯ ಹೆದ್ದಾರಿ 75ರ ಎಡಭಾಗದಲ್ಲಿ ಶ್ರೀ ಸಲೀಂ, ಬಿನ್. ಕೆ. ಅಬ್ದುಲ್, ಎಂಬುವವರು ಅನಧಿಕೃತವಾಗಿ ಕಟ್ಟಡ ನಿರ್ಮಾಣ ಮಾಡುತ್ತಿದ್ದು, ಸದರಿ ಕಟ್ಟಡವನ್ನು ತೆರವುಗೊಳಿಸುವಂತೆ ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ಹಾಸನ ಕಛೇರಿಯಿಂದ ನೋಟೀಸ್ ನೀಡಿದ್ದು, ಸದರಿ ನೋಟೀಸಿನ ವಿರುದ್ಧ ಶ್ರೀ ಸಲೀಂ, ಬಿನ್ ಕೆ. ಅಬ್ದುಲ್, ಇವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ತಡೆ ಆಜ್ಞೆ ತಂದಿರುತ್ತಾರೆ. (ದಾವೆ ಸಂಖ್ಯೆ: 28311/2014). ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ತಡೆಯಾಜ್ಞೆಯನ್ನು ತೆರವುಗೊಳಿಸಿ ಸದರಿ ಅನಧಿಕೃತ ಕಟ್ಟಡವನ್ನು ತೆರವುಗೊಳಿಸಲು ಕಾನೂನು ರೀತ್ಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

(ಈ) ಹಾಲಿ ರಾಷ್ಟ್ರೀಯ ಹೆದ್ದಾರಿ ನಿಯಮಾವಳಿ ಪ್ರಕಾರ ಗ್ರಾಮಾಂತರ ಪ್ರದೇಶದಲ್ಲಿ ರಾಷ್ಟ್ರೀಯ ಹೆದ್ದಾರಿ ಮಧ್ಯ ಭಾಗದಿಂದ 40 ಮೀಟರ್ ಹಾಗೂ ಪಟ್ಟಣ ಪ್ರದೇಶದಲ್ಲಿ ರಾಷ್ಟ್ರೀಯ ಹೆದ್ದಾರಿ ಗಡಿಯಿಂದ 6.00 ಮೀಟರ್‌ವರೆಗೆ ಕಟ್ಟಡ ನಿರ್ಮಿಸಲು ಅವಕಾಶವಿರುವುದಿಲ್ಲ.